**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಗ್ಗಡದೇವನಕೋಟೆ**

# C.C.No.768/2017

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಪ್ರಕಾಶ | CW-03 |
| ತಂದೆಯ /ಗಂಡನ ಹೆಸರು | : | ಯಲ್ಲಶೆಟ್ಟಿ | PW-01 |
| ವಯಸ್ಸು | : | 60 ವರ್ಷ | - |
| ಉದ್ಯೋಗ | : | ಕೂಲಿ ಕೆಲಸ | ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕಃ **31.03.2023.** |
| ವಾಸಸ್ಥಳ | : | ಹೊನ್ನಮ್ಮನಕಟ್ಟೆ ಗ್ರಾಮ | - |

**ಮುಖ್ಯ ವಿಚಾರಣೆಃ ಎಪಿಪಿ ರವರಿಂದಃ**

ಆರೋಪಿ ನನಗೆ ಗೊತ್ತು. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿ ಅದರಲ್ಲಿರುವ ಸಹಿಯು ತಮ್ಮದೇ ಎಂದು ನೋಡಿ ಗುರುತಿಸುವಂತೆ ಹೇಳಿದ್ದು ಸಾಕ್ಷಿಯು ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಸ್ಥಳ ಮಹಜರ್ ಆಗಿದ್ದು ಅದನ್ನು ನಿ.ಪಿ-1 ಮತ್ತು ಸಾಕ್ಷಿಯ ಸಹಿಯನ್ನು ನಿ.ಪಿ-1(ಎ) ಎಂದು ಗುರುತಿಸಲಾಯಿತು. ಮಹಜರ್ ನಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮಹಜರ್ ಮಾಡಿಲ್ಲ, ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿಲ್ಲ.

**(ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ ಪಾಟೀ ಸವಾಲಿಗೆ ಅನುಮತಿಯನ್ನು ನೀಡಲಾಯಿತು)**

**ಪಾಟೀ ಸವಾಲುಃ ಎಪಿಪಿ ರವರಿಂದಃ**

ದಿನಾಂಕ 04.03.2017 ರಂದು ಮಧ್ಯಾಹ್ನ 3.00 ಗಂಟೆ ಸಮಯದಲ್ಲಿ ಆರೋಪಿಯ ಮನೆಯ ಮುಂದೆ ಪೊಲೀಸರು ಚಾಸಾ-2 ಮತ್ತು ನನ್ನ ಸಮಕ್ಷಮ ಮಹಜರ್ ಕ್ರಮವನ್ನು ಜರುಗಿಸಿ ಆರೋಪಿ ಬಾಬ್ತು 90 ಎಂಎಲ್ ನ 30 ವಿಂಡ್ಸರ್ ಡಿಲಕ್ಸ ವಿಸ್ಕಿಯ ಪೌಚುಗಳು ಹಾಗೂ 90 ಎಂಎಲ್ ನ ಒರಿಜಿನಲ್ ಚಾಯಿಸ್ ಡಿಲಕ್ಸ ವಿಸ್ಕಿಯ ಪೌಚುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮಹಜರ್ ಗೆ ನಾನು ಸ್ಥಳದಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಸದರಿ ಪ್ರಕರಣದಂತೆ ಚಾಸಾ-1 ರವರ ಜೊತೆ ದಾಳಿಯಲ್ಲಿ ಭಾಗವಹಿಸಿರುತ್ತೇನೆ ಎಂದರೆ ಸರಿಯಲ್ಲ. ಈಗ ಓದಿ ಕೇಳಿಸಿಕೊಂಡ ನಿ.ಪಿ-1 ಮತ್ತು 2 ರಂತೆ ನಾನು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**(ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸಾ ಸ ಇ ಒ.,**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**